ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಮಾತಂವಿ/05/ಸಾಮಾನ್ಯ/2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 28.03.2019

## ಸುತ್ತೋಲೆ

ವಿಷಯ: 2019ನೇ ಲೋಕಸಭಾ ಚುನಾವಣಾ ಕಾರ್ಯಕ್ಕೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಒಳಪಡುವ ಸರ್ಕಾರಿ ಪದವಿ ಕಾಲೇಜುಗಳ ಕೊಠಡಿಗಳನ್ನು ಬಳಸಿಕೊಳ್ಳುವ ಬಗ್ಗೆ

******

2019ನೇ ಲೋಕಸಭಾ ಚುನಾವಣಾ ಕಾರ್ಯಕ್ಕೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಸರ್ಕಾರಿ ಪದವಿ ಕಾಲೇಜುಗಳ ಕೊಠಡಿಗಳನ್ನು ನೀಡುವ ಸಂದರ್ಭದಲ್ಲಿ ಕೊಠಡಿಗಳಲ್ಲಿ ಅಳವಡಿಸಿರುವ ಐ.ಸಿ.ಟಿ. ಸಂಬಂಧಿತ ಉಪಕರಣಗಳಾದ ಪ್ರೊಜೆಕ್ಟರ್‌ಗಳು, ಯುಪಿಎಸ್‌ಗಳು, ಡಿಸ್‌ಪ್ಲೇ ಯುನಿಟ್‌ಗಳು, ಪೋಡಿಯಂಗಳು, ಲ್ಯಾಪ್‌ಟಾಪ್‌ಗಳು ಇತ್ಯಾಧಿ ಉಪಕರಣಗಳನ್ನು ಸುರಕ್ಷಿತವಾಗಿ ತಗೆದಿಟ್ಟು ಅವುಗಳನ್ನು ಚುನಾವಣೆ ನಂತರ ಅಳವಡಿಸಿಕೊಳ್ಳುವಂತೆ ಸೂಚಿಸಿದೆ. ಒಂದು ವೇಳೆ ಐ.ಸಿ.ಟಿ. ಅಳವಡಿಸಿದ ಕೊಠಡಿಗಳಲ್ಲಿಯೇ ಚುನಾವಣಾ ತರಬೇತಿಯನ್ನು ನೀಡುವುದಾದಲ್ಲಿ ಸದರಿ ಉಪಕರಣಗಳನ್ನು ಸುರಕ್ಷಿತವಾಗಿ ಉಪಯೋಗಿಸಿಕೊಳ್ಳಲು ವ್ಯವಸ್ಥೆ ಮಾಡಲು ಸಹ ತಿಳಿಸಿದೆ.

ಪ್ರೊಜೆಕ್ಟರ್ ಇತ್ಯಾದಿ ಉಪಕರಣಗಳನ್ನು ಕಾಲೇಜಿನಿಂದ ಬೇರೆಡೆಗೆ ನೀಡುವುದನ್ನು ನಿಷೇಧಿಸಿದ್ದು, ಪ್ರಾಂಶುಪಾಲರು ಈ ಬಗ್ಗೆ ಆದ್ಯ ಗಮನವನ್ನು ಹರಿಸಿ ಐ.ಸಿ.ಟಿ. ಉಪಕರಣಗಳನ್ನು ಸುರಕ್ಷಿತವಾಗಿಟ್ಟುಕೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ,**

1. ಇಲಾಖಾ ವ್ಯಾಪ್ತಿಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ – ಮುಂದಿನ ಸೂಕ್ತ ಕ್ರಮಕ್ಕಾಗಿ
2. ಸರ್ಕಾರಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮುಂದಿನ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು:

1. ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560001 – ಮಾಹಿತಿಗಾಗಿ
2. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಶಾಖೆಗೆ – ಮಾಹಿತಿಗಾಗಿ
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ವೆಬ್‌ಸೈಟ್ ನಲ್ಲಿ ಪ್ರಕಟಿಸಲು
4. ಕಛೇರಿ ಪ್ರತಿಗಳು.

*Circular Election 2019*